# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 470

ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 20.02.2023

ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೊಮ್ಮನಹಳ್ಳಿ ಜಂಕ್ಷನ್ ಮತ್ತು ಗಾರೇಬಾವಿಪಾಳ್ಯ ಜಂಕ್ಷನ್ ನಡುವಿನ ಅಂತರವು ಬಹಳ ಕಡಿಮೆ ಇದೆ ಎನ್ನುವ ಕಾರಣಕ್ಕಾಗಿ ಸಿಲ್ಕ್ ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಯನ್ನು ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ಬಳಿಕ ಅಲ್ಲಿ ರಸ್ತೆ ಸಿಗ್ನಲ್ ಅಳವಡಿಸಿಲ್ಲ ಎಂಬುದಾಗಿ ಕಾರಣ ನೀಡುವ ಸಂಚಾರ ಪೊಲೀಸರು ಅದೇ ಕಾರಣಕ್ಕಾಗಿ ಅನಧಿಕೃತವಾಗಿ ತೆರೆಯಲಾದ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ಮುಚ್ಚದಿರಲು ಕಾರಣವೇನು ; | ➢ ರಸ್ತೆ ಸುರಕ್ಷತಾ ಸಮಿತಿಯ ಅಧಿಕಾರಿಗಳ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಪಿಲ್ಲರ್ ಸಂಖ್ಯೆ 4 & 5ರ ನಡುವೆ ಉಂಟಾಗುತ್ತಿದ್ದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಪಿಲ್ಲರ್ ಸಂಖ್ಯೆ 20 & 21ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಲು ನಿರ್ಧರಿಸಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೆರವುಗೊಳಿಸಲಾಗಿರುತ್ತದೆ.<br>➢ ರಸ್ತೆ ಸುರಕ್ಷತಾ ಸಮಿತಿಯ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಸ್ತೆ ವಿಭಜಕಗಳನ್ನು ತೆರವುಗೊಳಿಸಿರುವುದರಿಂದ ಹಾಗೂ ಈ ರಸ್ತೆಯು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಗೆ ಒಳಪಟ್ಟಿರುವುದರಿಂದ, ತೆರವುಗೊಳಿಸಿದ ರಸ್ತೆ ವಿಭಜಕಗಳನ್ನು ಪುನರ್ ನಿರ್ಮಿಸುವ ನಿರ್ಧಾರವನ್ನು ಪೊಲೀಸ್ ಇಲಾಖೆಯು ಸ್ವತಂತ್ರವಾಗಿ ತೆಗೆದುಕೊಳ್ಳಲು ಸಾಧ್ಯವಿರುವುದಿಲ್ಲ. |
| ಆ) | ಖಾಸಗಿ ಬಿಲ್ಡರ್‌ರವರ ವಸತಿ ಸಮುಚ್ಚಯ ಇದೆ ಎನ್ನುವ ಕಾರಣಕ್ಕಾಗಿ ಸದರಿ ವಸತಿ ಸಮುಚ್ಚಯದ ಮುಖ್ಯದ್ವಾರಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳು ದಿ:16.09.2021ರ ರಾತ್ರಿ ಅಕ್ರಮವಾಗಿ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ಕುರಿತು ಲೋಕೋಪಯೋಗಿ ಇಲಾಖೆಯಿಂದ ಸದನಕ್ಕೆ ಲಿಖಿತ ಉತ್ತರ ನೀಡಿದ್ದು, ಈ ಕುರಿತು ಸರ್ಕಾರದ ನಿಲುವೇನು ; | ರಾಷ್ಟ್ರೀಯ ಹೆದ್ದಾರಿ-7ರ ನಡುವಿನ ರಸ್ತೆ ವಿಭಜಕಗಳನ್ನು ಪೊಲೀಸ್ ಇಲಾಖೆಯಿಂದ ತೆರವುಗೊಳಿಸಿರುವುದಿಲ್ಲ. |
| ಇ) | ಪೊಲೀಸ್ ಇಲಾಖೆಯ ಅಧಿಕಾರಿಗಳೇ ದಿ:16.09.2021ರ ರಾತ್ರಿ ಅಕ್ರಮವಾಗಿ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ಕುರಿತು ಲೋಕೋಪಯೋಗಿ ಇಲಾಖೆವತಿಯಿಂದ ಸದನಕ್ಕೆ ಲಿಖಿತ ಉತ್ತರ ನೀಡಿದ ಬಳಿಕವು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಈ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದೆ ಎಂಬುದಾಗಿ ಸದನಕ್ಕೆ ಲಿಖಿತ ಉತ್ತರ ಕುರಿತು ಸರ್ಕಾರದ ನಿಲುವೇನು ? | |

ಹೆಚ್‌ಡಿ 69 ಎಸ್ಎಸ್‌ಟಿ 2023

(ಡಾ.ಜಿ.ಪರಮೇಶ್ವರ)
ಗೃಹ ಸಚಿವರು